# ತಮಿಳುನಾಡು ಯೋಜನೆಗೆ ಕಾನೂನು ಮಾನ್ಯತೆ ಇಲ್ಲ

19/3/21

ವಿಧಾನಪರಿಷತ್ತು: ಕಾವೇರಿ ನದಿಯ ಹೆಚ್ಚುವರಿ ನೀರು ಬಳಕೆ ಮಾಡಿಕೊಳ್ಳಲು ತಮಿಳುನಾಡು ಸರ್ಕಾರ ಜಾರಿಗೆ ತರಲು ಮುಂದಾಗಿರುವ ನದಿ ಜೋಡಣೆ ಯೋಜನೆಗೆ ಕಾನೂನು ಮಾನ್ಯತೆ ಇಲ್ಲ ಎಂದು ಉಪಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ ತಿಳಿಸಿದ್ದಾರೆ.



ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ಎಂ. ನಾರಾಯಣಸ್ವಾಮಿ ಪ್ರಶ್ನೆಗೆ ಉತ್ತರಿ ಸಿದ ಉಪಮುಖ್ಯಮಂತ್ರಿ, ಚುನಾವಣೆ ಗಡಿಬಿಡಿಯಲ್ಲಿ ತಮಿಳುನಾಡು ಸರ್ಕಾರ ಯೋಜನೆಗೆ ಅಡಿಗಲ್ಲು ಹಾಕಿದೆ. ಇದಕ್ಕೆ ಯಾವುದೇ ಕಾನೂನು ಮಹತ್ವ ಇಲ್ಲ, ಅಲ್ಲದೇ ಕೇಂದ್ರದ ಒಪ್ಪಿಗೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಮಧ್ಯಪ್ರವೇಶಿಸಿದ ಕಾನೂನು ಸಚಿವ ಬಸವರಾಜ ಬೊಮ್ಮಾಯಿ, ಕಾವೇರಿ ನ್ಯಾಯಾಧೀಕರಣದ ತೀರ್ಪಿನಲ್ಲಿ ಹೆಚ್ಚುವರಿ ನೀರಿನ ಪ್ರಸ್ತಾಪವಿಲ್ಲ, ಈ ನೀರಿನ ಬಳಕೆ ಮಾಡಿಕೊಳ್ಳಬೇಕಾದರೆ ಕಣಿವೆ ವ್ಯಾಪ್ತಿಯ ಎಲ್ಲಾ ರಾಜ್ಯಗಳ ಅನುಮತಿ ಬೇಕು. ಆದರೆ, ತಮಿಳುನಾಡು ಸರ್ಕಾರ ಅಕ್ರಮವಾಗಿ ಯೋಜನೆಗೆ ಮುಂದಾಗಿದೆ. ಇದಕ್ಕೆ ತಡೆ ನೀಡಬೇಕು ಎಂದು ಕೇಂದ್ರ ಸರ್ಕಾರ ಮತ್ತು ಕೇಂದ್ರ ಜಲ ಆಯೋಗಕ್ಕೆ ಮನವಿ ಮಾಡಿದ್ದೇವೆ. ಜೊತೆಗೆ ಸುಪ್ರೀಂಕೋರ್ಟ್‌ನಲ್ಲಿ ದಾವೆ ಸಹ ಹೂಡಲಾಗುವುದು. ನಮ್ಮ ನೀರಿನ ಹಕ್ಕನ್ನು ಪಡೆಯಲು ಸರ್ಕಾರ ಕಾನೂನು ಸಮರ ನಡೆಸಲಿದೆ ಎಂದು ಭರವಸೆ ನೀಡಿದರು.